46 (98) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಬೀದರ್ ಜಿಲ್ಲೆಯಲ್ಲಿ ಒಂದು ಭಾಷೆಯ ಶಿಕ್ಷಕರಾಗಿ ನೇಮಕಗೊಂಡ ನಂತರ ಬೇರೆ ಭಾಷೆಗೆ ನಿಯೋಜನೆ ಮಾಡುತ್ತಿರುವ ಹಲವಾರು ಪ್ರಕರಣಗಳು ಪತ್ತೆಯಾಗಿರುವುದು ನಿಜವೇ ,

ಆ) ಹಾಗಿದ್ದಲ್ಲಿ, ನಿಯಮಗಳಲ್ಲಿ ಇದಕ್ಕೆ ಅವಕಾಶವಿದೆಯೇ ,

ಇ) ಇಲ್ಲವಾದಲ್ಲಿ, ಇಂತಹ ಪ್ರಕರಣಗಳ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು)

ಅ) ಬೀದರ್ ಜಿಲ್ಲೆಯಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಒಂದು ಭಾಷೆಯ ಶಿಕ್ಷಕರಾಗಿ ನೇಮಕಗೊಂಡು ನಂತರ ಬೇರೆ ಭಾಷೆಗೆ ನಿಯೋಜನೆ ಮಾಡುತ್ತಿಲ್ಲ

ಆ) ನಿಯಮಗಳಲ್ಲಿ ಅವಕಾಶವಿರುವುದಿಲ್ಲ

ಇ) ಈ ಪ್ರಶ್ನೆ ಉದ್ಭವಿಸುವುದಿಲ್ಲ

47 (99) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ಕಳೆದ ಒಂದು ವರ್ಷದ ಅವಧಿಯಿಂದ ಇಲ್ಲಿಯವರೆಗೆ ಸರ್ವ ಶಿಕ್ಷಣ ಅಭಿಯಾನ ಕಾರ್ಯಕ್ರಮದಲ್ಲಿ ಬೀದರ ಜಿಲ್ಲೆಗೆ ಎಷ್ಟು ಶಾಲಾ ಕೊರಡಿಗಳೂ ಹಾಗೂ ಎಷ್ಟು ಶಾಲಾ ಕಟ್ಟಡಗಳು ಮಂಜೂರು ಮಾಡಲಾಗಿದೆ

ಆ) ಮೇಲ್ಕಂಡ ಅವಧಿಯಲ್ಲಿ ಈ ಕಾರ್ಯಕ್ರಮದಲ್ಲಿ ಎಷ್ಟು ಶಾಲಾ ಕೊರಡಿಗಳು ಹಾಗೂ ಕಟ್ಟಡಗಳನ್ನು ನಿರ್ಮಿಸಲಾಗಿದೆ

ಇ) ಉಳಿದಿರುವ ಕಾಮಗಾರಿಗಳು ಈಗ ಯಾವ ಹಂತದಲ್ಲಿವೆ (ಶಾಲಾವಾರು ಅಂಕಿ ಅಂಶಗಳಲ್ಲಿ ವಿವರಗಳನ್ನು ಒದಗಿಸುವುದು) ,

ಈ) ಇದಕ್ಕಾಗಿ ಇಲ್ಲಿಯವರೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ಹಾಗೂ ಈ ಪೈಕಿ ಎಷ್ಟು ಹಣ ಖರ್ಚು ಮಾಡಲಾಗಿದೆ (ವಿಧಾನ ಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು)